# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೩<br>Part – III | ಬೆಂಗಳೂರು, ಶನಿವಾರ, ೦೧, ಜನವರಿ, ೨೦೨೨ (ಪುಷ್ಯ, ೧೧, ಶಕವರ್ಷ, ೧೯೪೩)<br>BENGALURU, SATURDAY, 01, JANUARY , 2022 ( PUSHYA , 11, SHAKAVARSHA, 1943) | ನಂ. ೦೧<br>No. 01 |
|---|---|---|

## ನೋಂದಣಿ ಮತ್ತು ಮುದ್ರಾಂಕ ಇಲಾಖೆ

## ಅಧಿಸೂಚನೆ

**ಕಡತ ಸಂಖ್ಯೆ: ಸಿಬ್ಬಂದಿ–(1)–89/2021–22 ಮತ್ತು ನೋ.ಮು/ಸಿವಿಸಿ/99/2021–22** **ದಿನಾಂಕ:01–01–2022**

**ವಿಷಯ: ಕೋವಿಡ್–19 ವೈರಸ್ ಹರಡುವಿಕೆಯಿಂದ ಉಂಟಾದ ರಾಜಸ್ವ ನಷ್ಟವನ್ನು ಸಂಗ್ರಹಿಸಲು ಸ್ಥಿರಾಸ್ತಿಗಳ ಮಾರ್ಗಸೂಚಿ ದರಗಳನ್ನು ಕಡಿಮೆಗೊಳಿಸಿ ಜಾರಿಗೆ ತರುವ ಕುರಿತು.**

**ಉಲ್ಲೇಖ:**
1. ದಿನಾಂಕ:08–12–2021 ರಂದು ಸನ್ಮಾನ್ಯ ಮುಖ್ಯಮಂತ್ರಿರವರ ಅಧ್ಯಕ್ಷತೆಯಲ್ಲಿ ಹಾಗೂ ಇತರೆ ಹಿರಿಯ ಅಧಿಕಾರಿಗಳ ಉಪಸ್ಥಿತಿಯಲ್ಲಿ ನಡೆದ ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿನ ಸೂಚನೆ.
2. ಇದೇ ಸಮ ಸಂಖ್ಯೆಯ ಕಡತದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು, ಮಾನ್ಯ ಕಂದಾಯ ಮಂತ್ರಿಗಳು, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಮತ್ತು ಸರ್ಕಾರದ ಪ್ರದಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ ರವರಿಂದ ಅನುಮೋದಿತ ಟಿಪ್ಪಣಿ.
3. ಕೇಂದ್ರ ಮೌಲ್ಯ ಮಾಪನ ಸಮಿತಿ ಸಭೆಯ ನಡವಳಿ ಸಂಖ್ಯೆ:ನೋ.ಮು./ಸಿವಿಸಿ/ 99/2021–22 ದಿನಾಂಕ:01–01–2022.

**"ಕರ್ನಾಟಕ ಮುದ್ರಾಂಕ ಕಾಯ್ದೆ, 1957 ರ ಕಲಂ 45–ಬಿ ಮತ್ತು ಕರ್ನಾಟಕ ಮುದ್ರಾಂಕ (ಆಸ್ತಿಯ ಅಂದಾಜು ಸರಾಸರಿ ಮಾರುಕಟ್ಟೆ ಮೌಲ್ಯ ಮಾರ್ಗಸೂಚಿಯ ಪರಿಷ್ಕರಣೆ ಮತ್ತು ಪ್ರಕಟಣೆಗಾಗಿ ಕೇಂದ್ರ ಮೌಲ್ಯ ಮಾಪನ ಸಮಿತಿಯ ರಚನೆ) ಅಧಿನಿಯಮಗಳು, 2003 ರ ಕಲಂ 9(3) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ದಿನಾಂಕ:31–12–2021 ರಂದು ಜಾರಿಯಲ್ಲಿರುವ ರಾಜ್ಯದ ಎಲ್ಲಾ ವಿಧದ ಸ್ಥಿರಾಸ್ತಿಗಳ (ಕೃಷಿ ಜಮೀನು, ಕೃಷಿಯೇತರ ಜಮೀನು, ನಿವೇಶನ, ಕಟ್ಟಡ, ಅಪಾರ್ಟ್‌ಮೆಂಟ್ / ಫ್ಲಾಟ್‌ಗಳು ಮತ್ತು ಇತರೆ) ಮಾರ್ಗಸೂಚಿ ದರಗಳಿಗೆ ದಿನಾಂಕ:01–01–2022 ರಿಂದ 31–03–2022 ರವರೆಗಿನ ಅವಧಿಗೆ ಶೇ.10 ರಷ್ಟು ಕಡಿಮೆಗೊಳಿಸಿದ ದರಗಳನ್ನು ದಸ್ತಾವೇಜುಗಳ ನೋಂದಣಿಗೆ ಮಾರ್ಗಸೂಚಿ ದರಗಳೆಂದು ಪರಿಗಣಿಸಿ ಆದೇಶಿಸಿದೆ."**

**ಅಧ್ಯಕ್ಷರು,**
ಕೇಂದ್ರ ಮೌಲ್ಯ ಮಾಪನ ಸಮಿತಿ, ಹಾಗೂ
ನೋಂದಣಿ ಮಹಾಪರಿವೀಕ್ಷಕರು ಮತ್ತು
ಮುದ್ರಾಂಕಗಳ ಆಯುಕ್ತರು,
ಬೆಂಗಳೂರು.

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು



VIJAY N M

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297